ಬಸವಕಲ್ಯಾಣದಲ್ಲಿ ಶರಣ ಸಾಹಿತ್ಯ ಸಂಸ್ಕೃತಿಯನ್ನು ಅಭಿವೃದ್ಧಿಪಡಿಸುವುದು.

2243(2789) ಶ್ರೀ ಎಂ.ಜಿ. ಮುಳೆ (ಬಸವಕಲ್ಯಾಣ) :— ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಜ್ಯ ಸಚಿವೆಯರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ವಿಶ್ವಗುರು ಮಹಾತ್ಮ ಬಸವೇಶ್ವರರ ಕರ್ಮಭೂಮಿಯಾದ ಬಸವಕಲ್ಯಾಣದಲ್ಲಿ ಶರಣ ಸಾಹಿತ್ಯ ಸಂಸ್ಕೃತಿ ಅಭಿವೃದ್ಧಿಪಡಿಸಲು ಸರ್ಕಾರ ಉದ್ದೇಶಿಸಿದೆಯೇ?

ಆ) ಹಾಗಿದಲ್ಲಿ ಯೋಜನೆಯ ರೂಪುರೇಷೆಗಳೇನು? (ವಿವರ ನೀಡುವುದು)

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಜ್ಯ ಸಚಿವೆಯರು) :—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಕೊಳ್ಳೆಗಾಲ ತಾಲ್ಲೂಕಿನಲ್ಲಿ ಲೋಕೋಪಯೋಗಿ ಇಲಾಖೆಯ ಉಪ ವಿಭಾಗ ಕಛೇರಿ ತೆರೆಯುವುದು

2244 (2739) ಶ್ರೀ ಜಿಎನ್. ನಂಜುಂಡಸ್ವಾಮಿ (ಕೊಳ್ಳೆಗಾಲ) :— ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ. ಎರಡು ರಾಷ್ಟ್ರೀಯ ಹೆದ್ದಾರಿಗಳು ಹಾದು ಹೋಗುವ ಕೊಳ್ಳೆಗಾಲ ತಾಲ್ಲೂಕಿನಲ್ಲಿ ಲೋಕೋಪಯೋಗಿ ಇಲಾಖೆಯ ಉಪ ವಿಭಾಗ ಕಛೇರಿ ತೆರೆಯುವಂತೆ ಬೇಡಿಕೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಸದರಿ ಕಛೇರಿಯನ್ನು ಜರೂರಾಗಿ ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :—

ಅ. ಕೊಳ್ಳೆಗಾಲ ತಾಲ್ಲೂಕಿನಲ್ಲಿ ಈಗಾಗಲೇ ಲೋಕೋಪಯೋಗಿ ಇಲಾಖೆಯ ಉಪ ವಿಭಾಗ, ಕಛೇರಿ ಇರುವುದರಿಂದ ಈ ಬಗ್ಗೆ ಪುನ: ಯಾವುದೇ ಬೇಡಿಕೆ ಬಂದಿರುವುದಿಲ್ಲ.

ಪ್ರಶ್ನೆ ಉದ್ಭವಿಸುವುದಿಲ್ಲ.

ಬಿಳಿಗಿರಿ ರಂಗನ ಬೆಟ್ಟ, ಶಿವನಸಮುದ್ರ ಮತ್ತು ದರ್ಗಾ ಸ್ಥಳಗಳನ್ನು ಪ್ರವಾಸಿ ತಾಣಗಳಾಗಿ ಅಭಿವೃದ್ಧಿಗೊಳಿಸುವುದು.

2245 (2740) ಶ್ರೀ ನಂಜುಂಡಸ್ವಾಮಿ ಬಿ.ಎನ್. (ಕೊಳ್ಳೆಗಾಲ) :— ಮಾನ್ಯ ಪ್ರವಾಸ್ಯೋದ್ಯಮ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.